# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 915
ಸದಸ್ಯರ ಹೆಸರು : ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 13.12.2023.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳ ಸುತ್ತಲಿನ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಇರುವ ಹಲವು ಗೋಮಾಳ ಮತ್ತು ಸರ್ಕಾರಿ ಜಮೀನುಗಳು ಖಾಸಗಿಯವರಿಂದ ಅತಿಕ್ರಮಗೊಳಿಸಲ್ಪಟ್ಟಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಈ ಜಮೀನುಗಳ ವಿಸ್ತೀರ್ಣ ಎಷ್ಟು; (ಸಂಪೂರ್ಣ ವಿವರಗಳನ್ನು ಒದಗಿಸುವುದು) | ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಖಾಸಗಿಯವರಿಂದ ಸರ್ಕಾರಿ ಜಮೀನು ಅತಿಕ್ರಮಿಸಲ್ಪಟ್ಟಿರುವ ಪ್ರಕರಣಗಳ ವಿವರ ಈ ಕೆಳಕಂಡಂತಿದೆ;- |

| ಜಿಲ್ಲೆ | ತಾಲ್ಲೂಕು | ಪ್ರಕರಣಗಳ ಸಂಖ್ಯೆ | ವಿಸ್ತೀರ್ಣ ಎಕರೆ/ಗುಂಟೆ |
|---|---|---|---|
| ಬೆಂಗಳೂರು ನಗರ | ಬೆಂಗಳೂರು ಉತ್ತರ | 660 | 3086-30.15 |
| | ಯಲಹಂಕ | 1253 | 12764-05 |
| | ಬೆಂಗಳೂರು ಪೂರ್ವ | 4762 | 4475-07.10 |
| | ಬೆಂಗಳೂರು ದಕ್ಷಿಣ | 6759 | 8090-04.15 |
| | ಆನೇಕಲ್ | 1226 | 10531-22.09 |
| ಬೆಂಗಳೂರು ಗ್ರಾಮಾಂತರ | ದೇವನಹಳ್ಳಿ | 1562 | 2578-00 |
| | ದೊಡ್ಡಬಳ್ಳಾಪುರ | 2584 | 3491-00 |
| | ಹೊಸಕೋಟೆ | 3152 | 5004-00 |
| | ನೆಲಮಂಗಲ | 1349 | 1536-00 |
| | **ಒಟ್ಟು** | **23,307** | **51,555-31.01** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಅತಿಕ್ರಮಿಸಲ್ಪಟ್ಟಿರುವ ಜಮೀನುಗಳ ಪೈಕಿ ಎಷ್ಟು ಪ್ರಕರಣಗಳಲ್ಲಿ ಸರ್ಕಾರದಿಂದ ಎಷ್ಟು ವಿಸ್ತೀರ್ಣದ ಜಮೀನನ್ನು ವಶಕ್ಕೆ ಪಡೆಯಲಾಗಿದೆ; (ವಿವರ ನೀಡುವುದು) | ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಒತ್ತುವರಿ ತೆರವು ಮಾಡಿದ ಪ್ರಕರಣ ಹಾಗೂ ವಿಸ್ತೀರ್ಣದ ವಿವರ ಈ ಕೆಳಕಂಡಂತಿರುತ್ತದೆ. |

| ಜಿಲ್ಲೆ | ತಾಲ್ಲೂಕು | ಪ್ರಕರಣಗಳ ಸಂಖ್ಯೆ | ವಿಸ್ತೀರ್ಣ ಎಕರೆ/ಗುಂಟೆ |
|---|---|---|---|
| ಬೆಂಗಳೂರು ನಗರ | ಬೆಂಗಳೂರು ಉತ್ತರ | 310 | 2304-17 |
| | ಯಲಹಂಕ | 312 | 3500-06 |
| | ಬೆಂಗಳೂರು ಪೂರ್ವ | 1467 | 3144-21.15 |
| | ಬೆಂಗಳೂರು ದಕ್ಷಿಣ | 2023 | 3399-16 |
| | ಆನೇಕಲ್ | 762 | 4138-21.14 |
| ಬೆಂಗಳೂರು ಗ್ರಾಮಾಂತರ | ದೇವನಹಳ್ಳಿ | 1338 | 2340-00 |
| | ದೊಡ್ಡಬಳ್ಳಾಪುರ | 2536 | 3458-00 |
| | ಹೊಸಕೋಟೆ | 2540 | 4603-00 |
| | ನೆಲಮಂಗಲ | 1146 | 1378-00 |
| | **ಒಟ್ಟು** | **12434** | **28,264-19.05** |

| | | |
|---|---|---|
| ಇ) | ಅತಿಕ್ರಮಿಸಲ್ಪಟ್ಟ ಜಮೀನುಗಳನ್ನು ಸರ್ಕಾರದ ವಶಕ್ಕೆ ಪಡೆಯಲು ಸರ್ಕಾರಕ್ಕಿರುವ ತೊಡಕುಗಳೇನು? | ರಾಜ್ಯಾದ್ಯಾಂತ ಒಟ್ಟು 63,32,486 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 14,72,493 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. ವಿವಿಧ ನ್ಯಾಯಾಲಯಗಳಲ್ಲಿರುವ ಪ್ರಕರಣಗಳು, ಅಕ್ರಮ ಸಕ್ರಮ ಯೋಜನೆ ಮತ್ತು ಸಾರ್ವಜನಿಕ ಉದ್ದೇಶಗಳಿಗೆ ಬಳಕೆಯಾಗಿರುವ ಒಟ್ಟು 10,82,752 ಎಕರೆ/ಗುಂಟೆ ಜಮೀನು ಹೊರತುಪಡಿಸಿ, ಉಳಿದಂತೆ 3,89,741 ಎಕರೆ/ಗುಂಟೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಬೇಕಾಗಿದ್ದು, ಇದರಲ್ಲಿ 2,73,778 ಎಕರೆ/ಗುಂಟೆ ಸರ್ಕಾರಿ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ. ಉಳಿದಂತೆ 1,15,963 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ. ರಾಜ್ಯಾದ್ಯಂತ ಒತ್ತುವರಿ ತೆರವು ಕಾರ್ಯಚರಣೆ ಪ್ರಗತಿಯಲ್ಲಿರುತ್ತದೆ.<br><br>ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 21,712 ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 16,205 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. 5,507 ಪ್ರಕರಣಗಳು ಬಾಕಿ ಇದೆ. ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ವಿವಿಧ ಪ್ರಕರಣಗಳಲ್ಲಿ ಈವರೆಗೂ 75 ಜನರಿಗೆ ಒಂದು ವರ್ಷದಂತೆ ಶಿಕ್ಷೆ ಹಾಗೂ ದಂಡ ವಿಧಿಸಲಾಗಿದೆ.<br><br>ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ರಾಜ್ಯದ ಎಲ್ಲಾ ಜಿಲೆಗಳಲ್ಲಿ, ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯ ಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಆರ್‌ಡಿ 139 ಎಲ್‌ಜಿಕ್ಯೂ 2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು